## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿರಿಯ ನಾಗರಿಕರಿಗೆ ಹಾಗೂ ಸಂಸ್ಥೆಗೆ ಪ್ರಶಸ್ತಿ ನೀಡಲು ಆಯ್ಕೆ ಸಮಿತಿ ರಚಿಸುವ ಕುರಿತು.

ಓದಲಾಗಿದೆ: ನಿರ್ದೇಶಕರು, ಅಂಗವಿಕಲರ ಮತ್ತು ಹಿರಿಯ ನಾಗರೀಕರ ಕಲ್ಯಾಣ ಇಲಾಖೆ, ಇವರ ಪತ್ರ ಸಂಖ್ಯೆ:ನಿಅಕಇ:ಸಿ-4:ಹಿ.ನಾ.ಸನ್ಮಾನ.ಪ್ರಶಸ್ತಿ:ಪ್ರಸ್ತಾವನೆ-14:2010-11: 1143: ದಿನಾಂಕ:21.08.2010 ಮತ್ತು 03.09.2010.

====

ಪ್ರಸ್ತಾವನೆ:-

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ರಾಜ್ಯದಲ್ಲಿ 2003ರಿಂದ ಹಿರಿಯ ನಾಗರಿಕರ ನೀತಿಯನ್ನು ಜಾರಿಗೊಳಿಸಿದ್ದು, ಪ್ರತಿ ವರ್ಷ ಅಕ್ಟೋಬರ್-01ರಂದು ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಆಚರಿಸುತ್ತಿದ್ದು, ಆ ಸಂದರ್ಭದಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆಗೈದಂತಹ ವ್ಯಕ್ತಿಗಳನ್ನು ಗುರುತಿಸಿ ಸನ್ಮಾನವನ್ನು ಮಾಡಲಾಗುತ್ತಿದ್ದು, ಆ ಸಂದರ್ಭದಲ್ಲಿ ಹಿರಿಯ ನಾಗರಿಕರಿಗೆ ಪ್ರಶಸ್ತಿ ಪತ್ರ, ಫಲಕ, ಶಾಲು ಹಣ್ಣು ಹಂಪಲು ಬುಟ್ಟಿ ಇವುಗಳನ್ನು ನೀಡಿ ಗೌರವಿಸಲಾಗುತ್ತಿದ್ದು, ಆದರೆ ಯಾವುದೇ ನಗದು ಪುರಸ್ಕಾರ ನೀಡುವುದಕ್ಕೆ ಅವಕಾಶ ಇರುವುದಿಲ್ಲವೆಂದು ಹಾಗೂ ಈ ಸನ್ಮಾನ ಮಾಡಲು ಸಹ ಯಾವುದೇ ಯೋಜನೆಯಡಿ ಆಯವ್ಯಯವನ್ನು ಅವಕಾಶ ಮಾಡಿಕೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಸರ್ಕಾರದಿಂದ ಹಿರಿಯ ನಾಗರಿಕರಿಗೆ ವಿವಿಧ ಕ್ಷೇತಗಳಲ್ಲಿ ಸೇವೆ ಸಲ್ಲಿಸಿದ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು ಮತ್ತು ಕ್ರೀಡೆಗೆ ಸೇರಿದಂತೆ 5 ಪ್ರಶಸ್ತಿಗಳನ್ನು ವ್ಯಕ್ತಿ ಹಾಗೂ ಸಂಸ್ಥೆಗೆ ತಲಾ ಒಂದು ಪ್ರಶಸ್ತಿಯಂತೆ ಒಟ್ಟು 7 ಪ್ರಶಸ್ತಿಗಳೊಂದಿಗೆ ಪ್ರತಿ ಪ್ರಶಸ್ತಿಗೆ ರೂ.10,000/-ಗಳಂತೆ ನಗದು ಬಹುಮಾನವನ್ನು ನೀಡಬಹುದಾಗಿದೆಯೆಂದು ತಿಳಿಸಿದ್ದು, ರಾಜ್ಯ ಮಟ್ಟದಲ್ಲಿ ಪ್ರತಿ ವರ್ಷವೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಂತಹ ಹಿರಿಯ ನಾಗರಿಕರನ್ನು ಹಾಗೂ ಸಂಸ್ಥೆಯನ್ನು ಆಯ್ಕೆ ಮಾಡಲು ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡಂತೆ ಆಯ್ಕೆ ಸಮಿತಿ ರಚಿಸುವಂತೆ ಕೋರಿರುತ್ತಾರೆ.

| | | |
|---|---|---|
| 1 | ಸಂಬಂಧಪಟ್ಟ ಮಾನ್ಯ ಇಲಾಖಾ ಸಚಿವರು | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| 4 | ಉಪ ಕಾರ್ಯದರ್ಶಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, | ಸದಸ್ಯರು |
| 5 | ಹಿರಿಯ ನಾಗರಿಕರ ಕ್ಷೇತದಲ್ಲಿ ಸೇವೆ ಮಾಡುತ್ತಿರುವ ಒಬ್ಬ ಹಿರಿಯ ನಾಗರಿಕರು | ಸದಸ್ಯರು |
| 6 | ಹಿರಿಯ ನಾಗರಿಕರ ಕ್ಷೇತದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಯ ಪ್ರತಿನಿಧಿ | ಸದಸ್ಯರು |

ಪ್ರಸ್ತಾವನೆಯನ್ನು ಪರಿಶೀಲಿಸಿದ್ದು ಈ ಕೆಳಗೆ ಸೂಚಿಸಿದಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಮಮಇ 201 ಪಿಹೆಚ್‌ಪಿ 2010,**
**ಬೆಂಗಳೂರು, ದಿನಾಂಕ 05.10.2010;**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, 1ನೇ ಅಕ್ಟೋಬರ್‌ರಂದು ಪ್ರತಿ ವರ್ಷ ಹಿರಿಯ ನಾಗರಿಕರ ದಿನಾಚರಣೆ ಆಚರಿಸುವ ಸಂದರ್ಭದಲ್ಲಿ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ/ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ ಸಲ್ಲಿಸಿರುವುದು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವ್ಯಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಒಂದು ಸಂಸ್ಥೆಗೆ ಪ್ರಶಸ್ತಿ ಸೇರಿ ಒಟ್ಟು 7 ಪ್ರಶಸ್ತಿಗಳನ್ನು ಆಯ್ಕೆ ಮಾಡಲು ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡಂತೆ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1 | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, | ಸದಸ್ಯರು |
| 3 | ಸರ್ಕಾರದ ಉಪ ಕಾರ್ಯದರ್ಶಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| 4 | ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಮಾಡುತ್ತಿರುವ ಒಬ್ಬ ಹಿರಿಯ ನಾಗರಿಕರು | ಸದಸ್ಯರು |
| 5 | ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಯ ಪ್ರತಿನಿಧಿ | ಸದಸ್ಯರು |
| 6 | ನಿರ್ದೇಶಕರು, ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2 ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,

ಇವರಿಗೆ,

1. ಮಹಾಲೇಖಪಾಲರು,[ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ], ಕರ್ನಾಟಕ, ಬೆಂಗಳೂರು,
2. ನಿರ್ದೇಶಕರು, ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ಇಲಾಖೆ,
4. ಎಲ್ಲಾ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
5. ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು,
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.